# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಂಖ್ಯೆ: ವಾರ್ಡ್ ಸಂಖ್ಯೆ 10/ಸಭೆ/ಪಿಆರ್/25/2020-21** **ದಿನಾಂಕ: 16/10/2021.**

ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ. 10 ದೊಡ್ಡಬೊಮ್ಮಸಂದ್ರ ವಾರ್ಡ್ ಕಛೇರಿಯಲ್ಲಿ ದಿನಾಂಕ: 16/10/2021 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಹಾಜರಿದ್ದ ಅಧಿಕಾರಿ/ಸದಸ್ಯರು**

1. ಶ್ರೀ ಜಿ.ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ಹಾಗೂ ಸ.ಕಾ.ಅ, ಕೊಡಿಗೇಹಳ್ಳಿ ಉಪವಿಭಾಗ
2. ಶ್ರೀಮತಿ. ಶ್ವೇತಾ ಎನ್.ಆರ್, ಸಹಾಯಕ ಅಭಿಯಂತರರು
3. ಶ್ರೀ ಮಂಜುನಾಥ್, ಕಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀ. ಪ್ರವೀಣ್, ಹಿರಿಯ ಆರೋಗ್ಯ ಪರಿವೀಕ್ಷಕರು
5. ಸಹಾಯಕ ಅಭಿಯಂತರರು, ರಸ್ತೆ ಮೂಲಭೂತ ಸೌಕರ್ಯ, ಬಿಬಿಎಂಪಿ.
6. ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
7. ಬಾಬುರೆಡ್ಡಿ, ಸಹಾಯಕ ಅಭಿಯಂತರರು ಬಿ.ಬಿ.ಎಂ.ಪಿ. ವಿದ್ಯುತ್ ವಿಭಾಗ.
8. ಶ್ರೀ ಸತ್ಯನಾರಾಯಣ, ಕಂದಾಯ ವಸೂಲಿಗಾರರು
9. ಶ್ರೀ ಸುರೇಶ್ ಈ.ಎಸ್, ಬಿಬಿಎಂಪಿ ಮಾರ್ಷಲ್
10. ಶ್ರೀ ಗೋಪಾಲ್‌ಕೃಷ್ಣ, ಸದಸ್ಯರು
11. ಶ್ರೀ ಮಾಲಾದ್ರಿ, ಸದಸ್ಯರು
12. ಶ್ರೀಮತಿ. ಬೇಬಿರಾಣಿ, ಸದಸ್ಯರು
13. ಶ್ರೀ ಎಂ. ಶ್ರೀನಿವಾಸ್, ಸದಸ್ಯರು
14. ಶ್ರೀ ಪ್ರಕಾಶ್, ಸದಸ್ಯರು.

ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ:- ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು.

**ರಸ್ತೆ ಮೂಲಭೂತ ಸೌಕರ್ಯ ವಿಭಾಗ:**

- ರಾಮಚಂದ್ರಪುರ ಮುಖ್ಯರಸ್ತೆಯಲ್ಲಿ ಗಂಗಮ್ಮ ಸರ್ಕಲ್‌ನಿಂದ ಆಲ್‌ಸೀಸನ್ ಮಾರ್ಕೆಟ್ ಕಟ್ಟಡದವರೆಗೆ ಮತ್ತು ದೊಡ್ಡಬೊಮ್ಮಸಂದ್ರ ಆರ್ಚ್‌ನಿಂದ ಆಲ್‌ಸೀಸನ್ ಮಾರ್ಕೆಟ್ ಕಟ್ಟಡದವರೆಗೆ ಇರುವ ರಸ್ತೆಗುಂಡಿಗಳನ್ನು ಕೂಡಲೇ ಮುಚ್ಚಲು ಸದಸ್ಯರು ಹಾಗೂ ಸಾರ್ವಜನಿಕರು ಕೋರಿರುತ್ತಾರೆ.

**ಕ್ರಮ:** ರಸ್ತೆ ಮೂಲಭೂತ ಸೌಕರ್ಯ ವಿಭಾಗ, ಬಿಬಿಎಂಪಿ.

ಬಿ.ಡಬ್ಲ್ಯೂ.ಎಸ್.ಎಸ್.ಬಿ:

- ರಾಘವೇಂದ್ರ ಬಡಾವಣೆಯಿಂದ ರಾಮಕೃಷ್ಣ ಅಪಾರ್ಟ್‌ಮೆಂಟ್ ವರೆಗೆ UGD ಸಂಪರ್ಕವು ತುಂಬಾ ಹಳೆಯದಾಗಿದ್ದು, ಈ ಹಿಂದೆ ಅಳವಡಿಸಿರುವ ಪೈಪ್‌ಗಳನ್ನು ಅಳವಡಿಸಿರುವ ಪೈಪ್‌ಗಳು ತುಂಬಾ ಚಿಕ್ಕದಾಗಿದ್ದು, ಮಳೆ ಬಂದಾಗ ಮ್ಯಾನ್‌ಹೋಲ್‌ಗಳು ತುಂಬಿ ಹರಿಯುವುದರಿಂದ ಸದರಿ ಪೈಪ್‌ಗಳನ್ನು ಬದಲಿಸಲು ಸಾರ್ವಜನಿಕರು ಕೋರಿರುತ್ತಾರೆ.
- ಕಾತೇರಮ್ಮ ಬಡಾವಣೆಯಲ್ಲಿರುವ ಬೋರ್‌ವೆಲ್ ದುರಸ್ಥಿಯಲ್ಲಿದ್ದು, ಕೇಸಿಂಗ್ ಪೈಪ್‌ನ್ನು ಬದಲಾಯಿಸಲು ಸಾರ್ವಜನಿಕರು ಕೋರಿರುತ್ತಾರೆ.

**ಕ್ರಮ:** ಬಿ.ಡಬ್ಲ್ಯೂ.ಎಸ್.ಎಸ್.ಬಿ. ಅಧಿಕಾರಿಗಳು

- ರಾಮಚಂದ್ರಪುರ ಮುಖ್ಯರಸ್ತೆಯಲ್ಲಿ ಬರುವ ಗಂಗಮ್ಮ ಸರ್ಕಲ್ ಹತ್ತಿರ ಬಿ.ಇ.ಎಲ್. ಕಾಂಪೌಂಡ್‌ಗೆ ಹೊಂದಿಕೊಂಡಂತಿರುವ ಈಗಾಗಲೇ ಶಿಥಿಲಗೊಂಡಿರುವ ಬಸ್ ನಿಲ್ದಾಣವನ್ನು ಹೊಸದಾಗಿ ನಿರ್ಮಿಸಲು ಸದಸ್ಯರು ಮತ್ತು ಸಾರ್ವಜನಿಕರು ಕೋರಿರುತ್ತಾರೆ. ಹಾಗೂ ಗಂಗಮ್ಮ ಸರ್ಕಲ್ ಬಳಿ ನಾಲ್ಕು ರಸ್ತೆಗಳು ಕೂಡುವುದರಿಂದ ನಾಲ್ಕು ಕಡೆಗೆ ನಾಮಫಲಕಗಳನ್ನು ಅಳವಡಿಸಲು ಕೋರಿರುತ್ತಾರೆ.
  - **ಕ್ರಮ:** ಬಿ.ಬಿ.ಎಂ.ಪಿ. **T.E.C** ವಿಭಾಗಕ್ಕೆ ಸಭೆಯ ನಡಾವಳಿಯನ್ನು ಕಳುಹಿಸಿ, ಸಾರ್ವಜನಿಕರ ಮನವಿಯಂತೆ ಕೂಡಲೇ ಅಗತ್ಯ ಕ್ರಮಕೈಗೊಳ್ಳಲು ಕೋರಲಾಗಿದೆ.

- ಸಭೆಯಲ್ಲಿ ನೆರೆದಿದ್ದ ಸದಸ್ಯರು ಮತ್ತು ಸಾರ್ವಜನಿಕರು ಕೆರೆಗಳು ವಿಭಾಗ ಮತ್ತು ಬೃಹತ್ ನೀರುಗಾಲುವೆ ವಿಭಾಗಕ್ಕೆ ಸಂಬಂಧಿಸಿದಂತೆ ಅನೇಕ ಸಮಸ್ಯೆಗಳಿರುವುದರಿಂದ ಸದರಿ ವಿಭಾಗಕ್ಕೆ ಸಂಬಂಧಿಸಿದ ಅಧಿಕಾರಿಗಳನ್ನು ಮುಂದಿನ ಸಭೆಗೆ ಆಹ್ವಾನಿಸಲು ಕೋರಿರುತ್ತಾರೆ.
  - ಸಭೆಯ ನಡವಳಿಯಲ್ಲಿ ಸದರಿಯವರ ಮನವಿಯನ್ನು ದಾಖಲಿಸಿ ಮುಖ್ಯ ಅಭಿಯಂತರರು ಕೆರೆಗಳು ವಿಭಾಗ ಮತ್ತು ಮುಖ್ಯ ಅಭಿಯಂತರರು ಬೃಹತ್ ನೀರುಗಾಲುವೆ ವಿಭಾಗಕ್ಕೆ ಕಳುಹಿಸಿ, ಸಂಬಂಧಪಟ್ಟ ಅಧಿಕಾರಿಗಳನ್ನು ಸಭೆಗೆ ಹಾಜರಾಗಲು ಸೂಚಿಸುವಂತೆ ಕೋರಲಾಗಿದೆ.

**ವಿದ್ಯುತ್ ವಿಭಾಗ:**

ರಾಮಚಂದ್ರಪುರ ಮುಖ್ಯರಸ್ತೆಯಲ್ಲಿ ಗಂಗಮ್ಮ ಸರ್ಕಲ್ ಬಳಿ ಐದು ಬೀದಿ ದೀಪಗಳು ಮತ್ತು ಗುಂಡುತೋಪು ಹಿಂಭಾಗ ಎರಡು ಬೀದಿ ದೀಪಗಳು ಬಹಳ ದಿನದಿಂದ ದರಸ್ಥಿಯಲ್ಲಿರುವುದರಿಂದ ಕೂಡಲೇ ಬದಲಾಯಿಸಲು ಕೋರಿರುತ್ತಾರೆ.

ರಾಮಚಂದ್ರಪುರ ಹಳೆ ಗ್ರಾಮದಲ್ಲಿ ಹೈಮಾಸ್ಟ್ ವಿದ್ಯುತ್ ದೀಪವು ದುರಸ್ಥಿಯಲ್ಲಿದ್ದು, ಸದರಿ ವಿದ್ಯುತ್ ದೀಪವನ್ನು ಸರಿಪಡುಸುವಂತೆ ಮತ್ತು ಬಿ.ಇ.ಎಲ್. ಮುಖ್ಯರಸ್ತೆಯಲ್ಲಿ ದುರಸ್ಥಿಯಾಗಿರುವ ಐದು ಬೀದಿ ದೀಪಗಳನ್ನು ಸರಿಪಡಿಸುವಂತೆ ಕೋರಿರುತ್ತಾರೆ.

**ಕ್ರಮ:** ಬಿ.ಬಿ.ಎಂ.ಪಿ. ವಿದ್ಯುತ್ ವಿಭಾಗ

- ಕಲ್ಪವೃಕ್ಷ ಬಡಾವಣೆಯಲ್ಲಿ ಕಾವೇರಿ ನೀರು ಸರಬರಾಜಿನಲ್ಲಿ ವ್ಯತ್ಯಯ ಆಗುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಕಲ್ಪವೃಕ್ಷ ಬಡಾವಣೆಯಲ್ಲಿರುವ ಬೋರ್‌ವೆಲ್‌ನಿಂದ ಪೈಪ್‌ಲೈನ್ ಮಾಡಿ ನೀರು ಸರಬರಾಜು ಮಾಡಲು ಮಾಡಲು ಕ್ರಮಕೈಗೊಳ್ಳುವಂತೆ ಕೋರಿರುತ್ತಾರೆ.

  **ಕ್ರಮ**: ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ, ಬಿಬಿಎಂಪಿ.

- ದೊನ್ನೆಬಿರಿಯಾನಿ ಹೋಟೆಲ್‌ನವರು ತ್ಯಾಜ್ಯವನ್ನು ಚರಂಡಿಯಲ್ಲಿ ಹಾಕುತ್ತಿರುವುದರಿಂದ ಮ್ಯಾನ್‌ಹೋಲ್ ಬ್ಲಾಕ್ ಆಗುತ್ತಿದ್ದು, ಸದರಿ ಹೋಟೆಲ್‌ನವರಿಗೆ ತ್ಯಾಜ್ಯವನ್ನು ಸಮರ್ಪಕವಾಗಿ ವಿಲೇವಾರಿ ಮಾಡುವಂತೆ ಸೂಚಿಸಲು ಸಾರ್ವಜನಿಕರು ಮತ್ತು ಸದಸ್ಯರು ಕೋರಿರುತ್ತಾರೆ.

  - **ಕ್ರಮ**: ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ: 10, ಬಿಬಿಎಂಪಿ.

ಶ್ರೀ ಜಿ.ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ರವರು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

16/10/21

ನೋಡೆಲ್ ಅಧಿಕಾರಿ ವಾರ್ಡ್-10 ಹಾಗೂ ಸಹಾಯಕ
ಕಾರ್ಯಪಾಲಕ ಅಭಿಯಂತರರು
ಕೊಡಿಗೇಹಳ್ಳಿ ಉಪವಿಭಾಗ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಆರೋಗ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯಾರಣ್ಯಪುರ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ವಾರ್ಡ್ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
8. ಕಛೇರಿ ಕಡತಕ್ಕೆ.